# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/650/1/2021-22, ದಿನಾಂಕ :16/2/2022

ದಿನಾಂಕ: 05-02-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ. ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀಮತಿ. ಶಿಲ್ಪ.ಎನ್ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 6 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 7 | Annapurna | ಶಂಕರಪುರಂ ಪೊಲೀಸ್ ಠಾಣೆ | |
| 8 | Kumar | ಶಂಕರಪುರಂ ಪಿ.ಎಸ್ | |
| 9 | ಶ್ರೀ.ನರಸಿಂಹ | ಕಿ.ಆ.ಪ | |

ದಿನಾಂಕ 05-02-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್

ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ಅಸೋಸಿಯೋಷನ್‌ನ ಉಪಾಧ್ಯಕ್ಷರಾದ ಶ್ರೀ.ಹೆಚ್. ರಾಮನಾಥ್ ರವರು ಅಗಲಿರುವ ಬಗ್ಗೆ ಸಭೆಗೆ ತಿಳಿಸಿದರು. ಈ ಬಗ್ಗೆ ಸಭೆಯ ಸಂತಾಪ ಸೂಚಿಸಿ ಮೌನಾಚರಣೆಯನ್ನು ಸೂಚಿಸತು. ನಂತರ ಮಾತು ಮುಂದುವರೆಸಿ ಈ ಕೆಳಕಂಡ ವಿಷಯಗಳ ಬಗ್ಗೆ ಸೂಕ್ತ ಕ್ರಮವಹಿಸುವಂತೆ ಸಭೆಯಲ್ಲಿ ಕೋರಿದರು. ಅವುಗಳೆಂದರೆ,

- ಅ.ವ.ಕೃ ರಸ್ತೆಯು ಏಕ ಮುಖ ಸಂಚಾರವಾಗಿದ್ದು ಕೆಲವು ವಾಹನ ಸವಾರರು ವಿರುದ್ಧ ದಿಕ್ಕಿನಲ್ಲೂ ಸಹ ಸಂಚರಿಸುತ್ತಿರುವುದರಿಂದ ತೊಂದರೆಯಾಗುತ್ತಿರುವ ಬಗ್ಗೆ.
- ಸಜ್ಜನ್‌ರಾವ್ ವೃತ್ತದ ಪಾರ್ಕ್‌ನ ಅಭಿವೃದ್ಧಿ ಕಾಮಗಾರಿಯು ನಿಧಾನ ಗತಿಯಲ್ಲಿ ಸಾಗುತ್ತಿದ್ದು ಆದಷ್ಟು ಬೇಗ ಕಾಮಗಾರಿಯನ್ನು ಮುಗಿಸುವುದು.
- ರಸ್ತೆ ಗುಂಡಿಗಳನ್ನು ಮುಚ್ಚುವುದು.
- ಬೀಡಾಡಿ ಹಸುಗಳ ಹಾವಳಿಯನ್ನು ತಪ್ಪಿಸುವುದು.
- ಮಸೀದಿಗಳಲ್ಲಿ ಧ್ವನಿವರ್ಧಕಗಳನ್ನು ಬಳಸುತ್ತಿರುವ ಬಗ್ಗೆ.

ಈ ಮೇಲಿನ ಎಲ್ಲಾ ವಿಷಯಗಳ ಬಗ್ಗೆ ಚರ್ಚಿಸಿದ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಇಲಾಖೆಗಳಾದ ವಾರ್ಡ್‌ನ ಅಭಿಯಂತರರು, ಸಂಚಾರ ವಿಭಾಗದ ಪೊಲೀಸ್, ಕಾನೂನು ಸುವ್ಯವಸ್ಥೆ ಇಲಾಖೆ ಮತ್ತು ಸಂಗೋಪನಾ ಇಲಾಖೆ ಅಧಿಕಾರಿಗಳಿಗೆ ಸೂಕ್ತ ಕ್ರಮ ವಹಿಸುವಂತೆ ಸೂಚಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ ಈ ಕೆಳಕಂಡ ವಿಷಯಗಳ ಬಗ್ಗೆ ಸೂಕ್ತ ಕ್ರಮ ವಹಿಸುವಂತೆ ಕೋರಿದರು. ಅವುಗಳೆಂದರೆ,

- ಆರ್. ವಿ. ರಸ್ತೆಯ ಟೀಚರ್ಸ್ ಕಾಲೇಜ್ ಬಳಿ ಹೊಸ ಬಸ್ ಶೆಲ್ಟರ್ ನಿರ್ಮಿಸುವುದು.
- ಪಾದಚಾರಿ ರಸ್ತೆಯ ಅಭಿವೃದ್ಧಿಗಾಗಿ ವಾರ್ಡ್ ಕಮಿಟಿಗೆ ಮೀಸಲಿಟ್ಟಿರುವ 20 ಲಕ್ಷ ರೂಗಳ ಅನುದಾನದಲ್ಲಿ ಎಂ.ಎನ್. ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಬೋಲ್ಯಾರ್ಡ್ಸ್‌ಗಳನ್ನು ಅಳವಡಿಸುವುದು.

- ಸರ್ವೆಯರ್ ರಸ್ತೆಯಲ್ಲಿನ ಹಾರ್ಡ್‌ವೇರ್ ಶಾಪ್ ಬಗ್ಗೆ ಮತ್ತು ಕನ್ಸರ್‌ವೆನ್ಸಿಯಲ್ಲಿರುವ ನಾನ್‌ವೆಜ್ ಹೋಟೆಲ್ ಅನ್ನು ತೆರವುಗೊಳಿಸುವ ಬಗ್ಗೆ.
- ಒಣಕಸ, ಹಸಿಕಸವನ್ನು ಬೇರ್ಪಡಿಸದೇ ಸಂಗ್ರಹಿಸುತ್ತಿರುವ ಬಗ್ಗೆ.
- ಲಾಲ್ ಬಾಗ್ ವೆಸ್ಟ್‌ಗೇಟ್ ಮುಂಭಾಗ ಸ್ಯಾರಿ ಹೌಸ್ ಪಕ್ಕದಲ್ಲಿರುವ ಐಲ್ಯಾಂಡ್ ಅನ್ನು ಅಭಿವೃದ್ಧಿ ಪಡಿಸುವ ಬಗ್ಗೆ.
- ಕವಿ ಲಕ್ಷ್ಮೀಶ ರಸ್ತೆ ನ್ಯಾಷನಲ್ ಹೈ ಸ್ಕೂಲ್ ಸಿಗ್ನಲ್ ಬಳಿಯಲ್ಲಿ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುವುದನ್ನು ನಿಷೇಧಿಸುವುದು.

ನಂತರ ಎಂ.ಎಂ.ವಿ. ರಸ್ತೆಯ ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್ ರವರು ಮಾತನಾಡಿ ಡಯಾಗನಲ್ ರಸ್ತೆಯ ಪಾದಚಾರಿ ಮಾರ್ಗವನ್ನು ಸಮರ್ಪಕವಾಗಿ ಮಾಡದೇ ತಾತ್ಕಾಲಿಕವಾಗಿ ಮಾಡುತ್ತಿದ್ದು ಮತ್ತೆ ಹಾಳಾಗಿರುವುದನ್ನು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ರಸ್ತೆ ಮತ್ತು ಮೂಲಸೌಕರ್ಯ ವಿಭಾಗದ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ರೀತಿಯಲ್ಲಿ ಪಾದಚಾರಿ ಮಾರ್ಗವನ್ನು ಅಭಿವೃದ್ಧಿ ಪಡಿಸುವಂತೆ ಕೋರುವುದಾಗಿ ಮಾನ್ಯ ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Sulja.P

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)